ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

RTO ಕಛೇರಿಯಲ್ಲಿ ದಲ್ಲಾಳಿಗಳ ಹಾವಳಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

498(378) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) RTO ಕಛೇರಿಗಳಲ್ಲಿ ದಲ್ಲಾಳಿಗಳ ಹಾವಳಿ ಮಿತಿ ಮೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ 6 ವರ್ಷಗಳಲ್ಲಿ ಬೆಂಗಳೂರು ನಗರದ ಎಷ್ಟು RTO ಅಧಿಕಾರಿಗಳನ್ನು ಭ್ರಷ್ಟಾಚಾರ ಆರೋಪದಡಿ ಅಮಾನತ್ತು ಮಾಡಿ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲಾಗಿದೆ; (ಹೆಸರಿನೊಂದಿಗೆ ವಿವರ ನೀಡುವುದು)

(ಇ) ಕಳೆದ 6 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು RTO ಕಛೇರಿಗಳ ಮೇಲೆ ಎಸಿಬಿ ದಾಳಿಯಾಗಿದೆ ; ಈ ದಾಳಿಯಲ್ಲಿ ಸಿಲುಕಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಆದಾಯಕ್ಕಿಂತ ಹೆಚ್ಚಿನ ಆಸ್ತಿಯನ್ನು ಹೊಂದಿರುವ ಕಾರಣಕ್ಕೆ ಎಷ್ಟು RTO ಅಧಿಕಾರಿಗಳ ವಿರುದ್ಧ ದಾವೆಗಳು ದಾಖಲಾಗಿದೆ; ದಾವೆಗಳು ದಾಖಲಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಅಧಿಕಾರಿಗಳ ಹೆಸರು ಮತ್ತು ದಾಳಿಯ ಸಂದರ್ಭದಲ್ಲಿ ಅವರ ಆದಾಯಕ್ಕಿಂತ ಎಷ್ಟು ಹೆಚ್ಚಿನ ಪ್ರಮಾಣದಲ್ಲಿ ಆಸ್ತಿ ಇತ್ತು ಎಂಬುದರ ಕುರಿತು ವಿವರ ನೀಡುವುದು)